
# ಶ್ರೀ ರಾಮಾಯಣ ದರ್ಶನಂ

**ಶ್ರೀರಾಮಾಯಣದರ್ಶನಂ**

ಮಹಾಕಾವ್ಯವಾದ ರಾಮಾಯಣವನ್ನು ಆಧರಿಸಿ ಕುವೆಂಪುರವರು ರಚಿಸಿದ ಆಧುನಿಕ ಕನ್ನಡ ಸಾಹಿತ್ಯದ ಮೇರು ಕೃತಿಯಾಗಿದ್ದು ಕೇಂದ್ರ ಸಾಹಿತ್ಯ ಅಕಾಡೆಮಿ ಮತ್ತು ೧೯೬೮ ರಲ್ಲಿ 'ಜ್ಞಾನಪೀಠ ಪ್ರಶಸ್ತಿ'ಯನ್ನು ಕುವೆಂಪುರವರಿಗೆ ತಂದೊದಗಿಸಿದೆ.




ಆಧುನಿಕ ಕನ್ನಡ ಸಾಹಿತ್ಯದ ಮಹೋನ್ನತ ಕೃತಿ. ಮಹಾಕಾವ್ಯಗಳ ರಚನೆಯ ಯುಗ ಮುಗಿದೇ ಹೋಯಿತು ಎನ್ನುವಾಗಲೇ ಸೃಷ್ಟಿಯಾದ ಆಧುನಿಕ ಮಹಾಕಾವ್ಯ. ವಾಲ್ಮೀಕಿಯ ಕಥಾ ಹಂದರದ ಮೇಲೆ ಸರ್ವೋದಯ ಸಮನ್ವಯ ತತ್ವಗಳನ್ನು ಪ್ರತಿಪಾದಿಸಿ ರಚಿತವಾದ ಈ ಕೃತಿ 'ಕುವೆಂಪುವ ಸೃಜಿಸಿದ' ಮಹಾಕೃತಿಯೂ ಹೌದು. 'ಬಹಿರ್ಘಟನೆಯಂ ಪ್ರತಿಕೃತಿಸುವ ಲೌಕಿಕ ಚರಿತ್ರೆ ಮಾತ್ರವಲ್ಲದೆ, ಅಲೌಕಿಕ ನಿತ್ಯ ಸತ್ಯಂಗಳಂ ಪ್ರತಿಮಿಸುವ ಸತ್ಯಸ್ಯ ಸತ್ಯ ಕಥನ'ವೂ ಹೌದು. ಸುಮಾರು ಒಂಭತ್ತು ವರ್ಷಗಳ ಸುದೀರ್ಘ ಕಾಲಾವಧಿಯಲ್ಲಿ ಈ ಕಾವ್ಯ ರಚಿತವಾಗಿದೆ. 1949ರಲ್ಲಿ ಮೊದಲ ಭಾಗ ಮತ್ತು 1951ರಲ್ಲಿ ಎರಡನೆಯ ಭಾಗ ಪ್ರಕಟವಾದವು. ನಂತರ,

ಎರಡೂ ಭಾಗಗಳನ್ನು ಸೇರಿಸಿ ಒಂದೇ ಗ್ರಂಥವನ್ನಾಗಿಸಿ ಪ್ರಕಟಿಸಲಾಯಿತು. ಇದುವರೆಗೆ ಸುಮಾರು 20ಕ್ಕು ಹೆಚ್ಚಿನ ಮರುಮುದ್ರಣಗಳಾಗಿವೆ. ಕಾವ್ಯದ ವಾಚನ, ವ್ಯಾಖ್ಯಾನಗಳಿಗೆ ಸಂಬಂದಿಸಿದಂತೆ ಹಲವಾರು ಧ್ವನಿಮುದ್ರಿಕೆಗಳು ಹೊರಬಂದಿವೆ. ಸಂಸ್ಕೃತ, ಇಂಗ್ಲಿಷ್ ಮತ್ತು ಹಿಂದಿ ಭಾಷೆಗಳಿಗೆ ಅನುವಾದಗೊಂಡು ಸಹೃದಯ ಓದುಗರನ್ನು ಸಂಪಾದಿಸಿದೆ. ಕನ್ನಡಕ್ಕೆ ಮೊದಲ ಜ್ಞಾನಪೀಠ ಪುರಸ್ಕಾರವನ್ನೂ, ಕೇಂದ್ರ ಸಾಹಿತ್ಯ ಅಕಾಡೆಮಿಯ ಸಾಹಿತ್ಯ ಪುರಸ್ಕಾರವನ್ನೂ ಒದಗಿಸಿಕೊಟ್ಟ ಕೃತಿರತ್ನವೂ ಇದಾಗಿದೆ. ಮಹಾಕಾವ್ಯದ ನಡೆಗೆ ಅನ್ವಯವಾಗುವಂತೆ ಸರಳರಗಳೆಯನ್ನು ಪುನರ್ ರೂಪಿಸಿಕೊಂಡ ಮಹಾಛಂದಸ್ಸಿನಲ್ಲಿ ರಚಿತವಾಗಿದೆ. ಲಲಿತ ರಗಳೆಯ ಬಂಧದಲ್ಲಿ ಅಂತ್ಯ ಪ್ರಾಸವನ್ನು ತ್ಯಜಿಸಿ ಸರಳ ರಗಳೆಯಾಗಿ ಪರಿವರ್ತಿಸಿ ಮಹಾಛಂದಸ್ಸನ್ನು ಕವಿ ನಿರ್ಮಿಸಿಕೊಂಡಿದ್ದಾರೆ. ಕಾವ್ಯದ ನಡೆಗೆ ಹಲವಾರು ಮಹೋಪಮೆಗಳನ್ನೂ ಕವಿ ಬಳಸಿದ್ದಾರೆ. ಹೀಗೆ, ಪ್ರಸ್ತುತಿ, ಛಂದಸ್ಸು, ಅಲಂಕಾರ, ಯುಗ ಧರ್ಮ ಹೀಗೆ ಎಲ್ಲಾ ವಿಷಯಗಳಲ್ಲೂ ಇದೊಂದು ಆಚಾರ್ಯ ಕೃತಿಯೆನಿಸಿದೆ. ಅಯೋಧ್ಯಾ ಸಂಪುಟಂ, ಕಿಷ್ಕಿಂಧಾ ಸಂಪುಟಂ, ಲಂಕಾ ಸಂಪುಟಂ ಮತ್ತು ಶ್ರೀ ಸಂಪುಟಂ ಎಂಬ ನಾಲ್ಕು ಸಂಪುಟಗಳ ಅಡಿಯಲ್ಲಿ ವಿಸ್ತರಿಸಿರುವ, ಒಟ್ಟು ಐವತ್ತು ಸಂಚಿಕೆಗಳಲ್ಲಿ, ಒಟ್ಟು ೨೨೨೯೧ ಸಾಲುಗಳ ಮಹಾಕಾವ್ಯ ಅಡಕವಾಗಿದೆ. ಕೃತಿಯ ಆರಂಭದಲ್ಲೇ, ಕವಿಯು ತಮ್ಮ ನೆಚ್ಚಿನ ಗುರುಗಳಾದ ಶ್ರೀ ವೆಂಕಣ್ಣಯ್ಯನವರಿಗೆ ಕಾವ್ಯವನ್ನು ಅರ್ಪಣೆ ಮಾಡಿದ್ದಾರೆ. ನಿತ್ಯ ಸತ್ಯವನ್ನುಸಾರುವ ಕಾವ್ಯೋದ್ದೇಶವನ್ನು ಕೆಳಗಿನಂತೆ ಸ್ಪಷ್ಟಪಡಿಸಿದ್ದಾರೆ.

**ಬಹಿರ್ಘಟನೆಯಂ ಪ್ರತಿಕೃತಿಸುವಾ ಲೌಕಿಕ**
**ಚರಿತ್ರೆಯಲ್ತಿದು, ಅಲೌಕಿಕ ನಿತ್ಯ ಸತ್ಯಂಗಳಂ**
**ಪ್ರತಿಮಿಸುವ ಸತ್ಯಸ್ಯ ಸತ್ಯ ಕಥನಂ ಕಣಾ,**
**ಶ್ರೀ ಕುವೆಂಪುವ ಸೃಜಿಸಿದೀ ಮಹಾಛಂದಸ್ಸಿನ**
**ಮೇರುಕೃತಿ, ಮೇಣ್ ಜಗದ್ಭವ್ಯ ರಾಮಾಯಣಂ!**

ಹಳೆಯ ಕಥೆ ಹೊಸ ಯುಗಧಮವನ್ನು ಮೈಗೂಡಿಸಿಕೊಂಡು, ಎಷ್ಟರಮಟ್ಟಿಗೆ ಹೊಸದಾಗಬಹುದು ಎಂಬುದಕ್ಕೆ ಈ ಮಹಾಕಾವ್ಯ ಉಜ್ವಲ ಉದಾಹರಣೆಯಾಗಿದೆ. ಮಿಲ್ಟನ್ ಕವಿಯ 'ಪ್ಯಾರಡೈಸ್ ಲಾಸ್ಟ್' 'ಪ್ಯಾರಡೈಸ್ ರಿಗೇನ್ಡ್' ಆದ ಮೇಲೆ ಯಾವ ಭಾಷೆಯಲ್ಲೇ ಆಗಲಿ ಈ ಪ್ರಮಾಣದ ಒಂದು ಮಹಾಕಾವ್ಯ ಬಂದದ್ದನ್ನು ಕಾಣೆ -ಎಂದು ರಾಷ್ಟ್ರಕವಿ ಗೋವಿಂದ ಪೈ

ಅವರು ಹೇಳಿದ್ದರೆ, ಶ್ರೀ ದೇವೇಂದ್ರ ಕುಮಾರ ಹಕಾರಿಯವರು ಇಪ್ಪತ್ತನೆಯ ಶತಮಾನದ ಜಟಿಲ ಮತ್ತು ಸಂಕೀರ್ಣ ಅನುಭವಗಳನ್ನು ಅಭಿವ್ಯಕ್ತಿಯ ಸಂಭವನೀಯ ಆಯಾಮಗಳಿಗೆ ಅಳವಡಿಸಿ, ಅದಕ್ಕನುಗುಣವಾದ ಬೃಹತ್ ಪರಿಧಿಗಳನ್ನು ಸೃಷ್ಟಿಸಿ ರೂಪಗೊಂಡ ಶ್ರೀ ಕುವೆಂಪು ಅವರ 'ಶ್ರೀರಾಮಾಯಣ ದರ್ಶನಂ' ಸಹಜ ಸಂವೇದನೆಯ ಒಂದು ಮಹೋನ್ನತ ಕೃತಿ ಎಂದಿದ್ದಾರೆ.

## ಸಂಪುಟಗಳು

ನಾಲ್ಕು ಸಂಪುಟಗಳನ್ನು ೫ ಸಂಚಿಕೆಗಳಲ್ಲಿ ಒಟ್ಟು ೨೨೨೯೧ ಸಾಲುಗಳಲ್ಲಿ ಬರೆದಿದ್ದಾರೆ.

### ಅಯೋಧ್ಯಾ ಸಂಪುಟಂ

1. ಕವಿಕ್ರುತು ದರ್ಶನಂ (೭೧೪)
2. ಶಿಲಾ ತಪಸ್ವಿನಿ (೬೮೭)
3. ಮಮತೆಯ ಸುಳಿ ಮಂಥರೆ (೬೨೯)
4. ಊರ್ಮಿಳಾ (೫೯೩)
5. ಭರತಮಾತೆ (೩೦೮)
6. ಅಗ್ನಿಯಾತ್ರೆ (೩೪೨)
7. ಚಿತ್ರಕೂಟಕೆ (೪೪೦)
8. ಕುಣಿದಳುರಿಯ ಊರ್ವಶಿ (೨೫೦)
9. ಪಾದುಕಾ ಕಿರೀಟಿ (೬೪೦)
10. ಅತ್ರಿಯಿಂದಗಸ್ತ್ಯಂಗೆ (೪೭೯)
11. ಪಂಚವಟಿಯ ಪರ್ಣಕುಟಿ (೪೧೧)

### ಕಿಷ್ಕಿಂದಾ ಸಂಪುಟಂ

1. ಲಂಕೇಶನೊಲಿಸಿದನು ಮಾರೀಚನಂ (೪೩೮)
2. ಓ ಲಕ್ಷ್ಮಣಾ! (೯೦೭)
3. ಶಬರಿಗಾದನು ಅತಿಥಿ ದಾಶರಥಿ (೩೮೫)
4. ಅತ್ತಲಾ ಕಿಷ್ಕಿಂಧೆಯೊಳ್ (೧೮೮)
5. ಪೂರ್ಣೆನಗ್ನಿಯೆ ಸಾಕ್ಷಿ! (೪೧೬)

6. ನೀಂ ಸತ್ಯವ್ರತನೆ ದಿಟಂ! (೪೬೫)

7. ಸಂಸ್ಕೃತಿ ಲಂಕಾ (೩೧೧)

8. ನಾನಕ್ಕನೆನ್ ನಿನಗೆ, ತಂಗೆ! (೨೧೨)

9. ಸುಗ್ರೀವಾಜ್ಞೆ (೫೮೩)

10. ಇರ್ದುದು ಮಹೇಂದ್ರಾಚಲಂ (೧೦೯೮)

11. ಸಾಗರೋಲ್ಲಂಘನಂ (೪೪೧)

12. ದಶಶಿರ ಕನಕಲಕ್ಷ್ಮಿ (೩೪೮)

**ಲಂಕಾ ಸಂಪುಟಂ**

1. ಕನಕಲಂಕಾನ್ವೇಷಣಂ (೭೫೨)

2. ವನಮಂ ಪೊಕ್ಕನಶೋಕಮಂ (೨೯೪)

3. ಕಂಡನಾ ಹದಿಬದೆಯರಧಿದೇವಿಯಂ (೩೫೩)

4. ಅಶ್ರುಗಂಗೋತ್ರಿ (೭೧೭)

5. ಕಿವಿಗೊಟ್ಟನವನಿಜಾ ರಮಣಂ (೨೯೪)

6. ರಣವ್ರತರ್ ವಹ್ನಿರಂಹರ್ (೨೯೭)

7. ಅತ್ತಲಾ ದೈತ್ಯ ಸಭೆಯೊಳ್ (೬೧೮)

8. ನಿನ್ನಮಗಳಲ್ತೆನ್ನವಳ್ ಅನಲೆ! (೨೩೨)

9. ಮರಣಮಥವಾ ಶರಧಿತರಣಂ! (೪೫೪)

10. ಶುಕಂ ಸಾರಣಂವೆರಸಿ (೨೩೪)

11. ಸಫಲಮಾಯ್ತಾ ರಾಯಭಾರಂ (೧೬೬)

12. ಸೈನ್ಯ ಗುಪ್ತಿ (೩೦೫)

13. ಸ್ವಪ್ನದೇವಿಗೆ ತಪೋಲಕ್ಷ್ಮಿ (೩೨೨)

14. ಅದ್ವಿತೀಯಮಾ ದ್ವಿತೀಯಂ ದಿನಂ (೪೭೦)

**ಶ್ರೀ ಸಂಪುಟಂ**

**ಕುಂಭಕರ್ಣನನೆಬ್ಬಿಸಿಮ! (೪೩೩)**

1. ರಸಮಲ್ತೆ ರುದ್ರದೃಷ್ಟಿಗೆ ರೌದ್ರಮುಂ! (೫೨೨)
2. ದೂರಮಿರದಿನ್ ಸುಗತಿ! (೨೬೮)
3. ಮಡಿದನಿಂದ್ರಜಿತು ಐಂದ್ರಾಸ್ತ್ರದಿಂ (೬೬೧)
4. ನೀಂ ಮಹಚ್ಛಿಲ್ಪಿ ದಿಟಂ! (೩೭೨)
5. ಶ್ರೀರಾಮ ರಾವಣ ಚಿತ್‌ತಪಸ್‌ಶ್ರೀ (೪೬೧)
6. ದಶಾನನ ಸ್ವಪ್ನಸಿದ್ಧಿ (೩೩೦)
7. ಅರಾವಣಂ ವಾ ಅರಾಮಂ ದಿಟಂ! (೫೦೦)
8. ಸೆರೆ ಸಿಲ್ಕಿದನೊ ವೈರಿ! (೨೬೨)
9. ದೈತ್ಯನೇರ್ದನ್ ಚೈತ್ಯಮಂಚಮಂ (೩೮೫)
10. ರಯಗೆ ಕರೆದೊಯ್, ಓ ಅಗ್ನಿ! (೬೦೮)
11. ತಪಸ್ಸಿದ್ಧಿ (೪೫೮)
12. ಅಭಿಷೇಕ ವಿರಾಟ್ ದರ್ಶನಂ (೨೩೮)

**ಕೆಲವು ಅಭಿಪ್ರಾಯಗಳು**

ಯುಗದ ಕವಿಗೆ ಜಗದ ಕವಿಗೆ ಶ್ರೀ ರಾಮಾಯಣ ದರ್ಶನದಿಂದಲೇ ಕೈ ಮುಗಿದ ಕವಿಗೆ - ಮಣಿಯದವರು ಯಾರು? ರಾಮಕೃಷ್ಣ ವಚನೋದಿತ ಪ್ರತಿಭೆ ತೆರೆದ ಕವನ ತತಿಗೆ ತಣಿಯದವರು ಆರು? ಮಲೆನಾಡಿನ ಸೌಂದರ್ಯಕೆ ಕುಣಿದಾಡಿದ ಕವಿಯ ಜತೆಗೆ ಕುಣಿಯದವರು ಆರು? ಕನ್ನಡಿಸಲಿ ಶಿವ ಜೀವನ ಮುನ್ನಡೆಸಲಿ ಯುವ-ಜನ-ಮನ ಇದೆ ಪ್ರಾರ್ಥನೆ ನಮಗೆ ತಮವೆಲ್ಲಿದೆ ರವಿಯಿದಿರಿಗೆ? ಉತ್ತಮ ಕವಿ ನುಡಿ-ಚದುರಗೆ ಚಾರುತ್ವದ ಕುಂದಣದಲಿ ಚಾರಿತ್ರ್ಯದ ರತ್ನ ಚಾತುರ್ಯದ ಮಂತಣದಲಿ ಸತ್ಸಂಗದ ಯತ್ನ ಇದೆ ತೃಪ್ತಿಯು ನಿಮಗೆ **- ದ.ರಾ. ಬೇಂದ್ರೆ**

ಹಳೆಯ ಕಥೆ ಹೊಸ ಯುಗಧರ್ಮವನ್ನು ಮೈಗೂಡಿಸಿಕೊಂಡು, ಎಷ್ಟರಮಟ್ಟಿಗೆ ಹೊಸದಾಗಬಹುದೆಂಬುದಕ್ಕೆ, ಈ ಮಹಾಕಾವ್ಯ ಉಜ್ವಲ ಉದಾಹರಣೆಯಾಗಿದೆ. ಇದಕ್ಕೆ ಭಾರತೀಯ ಸಾಹಿತ್ಯದಲ್ಲಿಯೇ ಒಂದು ಅನನ್ಯವಾದ ಸ್ಥಾನವಿದೆ. ಮಿಲ್ಟನ್ ಕವಿಯ 'ಪ್ಯಾರಡೈಸ್

ಲಾಸ್ಟ್' 'ಪ್ಯಾರಡೈಸ್ ರೀಗೇನ್ಡ್' ಆದ ಮೇಲೆ ಯಾವ ಭಾಷೆಯಲ್ಲೇ ಆಗಲಿ ಈ ಪ್ರಮಾಣದ ಒಂದು ಮಹಾಕಾವ್ಯ ಬಂದದ್ದನ್ನು ಕಾಣೆ! **- ಗೋವಿಂದ ಪೈ**

ಐರೋಪ್ಯರಿಗೆ ಈ ಶ್ರೀರಾಮಾಯಣ ದರ್ಶನಂ ಮಹಾಕಾವ್ಯದ ಗುಣಧರ್ಮ ತಿಳಿದಿದ್ದರೆ ನೋಬೆಲ್ ಪಾರಿತೋಷಕಕ್ಕೆ ಅದನ್ನು ಬಿಟ್ಟರೆ ಯಾವ ಕೃತಿಯೂ ಅರ್ಹವಲ್ಲ ಎಂದು ಅವರು ನಿರ್ಧರಿಸುತ್ತಿದ್ದರು. **- ಪಾಟೀಲ ಪುಟ್ಟಪ್ಪ**

## 'ರಾಮಾಯಣದರ್ಶನಂ' ಕಾವ್ಯದ ಶೈಲಿಯ ಪರಿಚಯ

- ಉದಾಹರಣೆಗೆ ಶ್ರೀ ರಾಮಾಯಣ ದರ್ಶನಂ ಮಹಾಕಾವ್ಯದ ಕೆಲವು ಸಾಲುಗಳನ್ನು [[ಶಂಕರ ಮೊಕಾಶಿ ಪುಣೇಕರ|ಶಂಕರ ಮೊಕಾಶಿ ಪುಣೇಕರರ ಆಂಗ್ಲ ಅನುವಾದದ ಸಾಲುಗಳ ಜತೆ, ಅರ್ಥಸಹಿತ ಕೆಳಗೆ ಉಲ್ಲೇಖಿಸಿದೆ. ಕಾವ್ಯದ ಮೂಲ ಮತ್ತು ಅನುವಾದದ ಸೊಬಗನ್ನು ನೋಡಬಹುದು:-

**ಶ್ರೀರಾಮಾಯಣ ದರ್ಶನಂ ಮಹಾಕಾವ್ಯದ ಆರಂಭದ ಐದು ಸಾಲುಗಳು**

ಶ್ರೀ ರಾಮ ಕಥೆಯಂ ಮಹರ್ಷಿ ನಾರದ ವೀಣೆಯಿಂ
ಕೇಳ್ದು, ಕಣ್ದಾವರೆಯೊಳಶ್ರುರಸಮುಗುವನ್ನೆಗಂ
ರೋಮಹರ್ಷಂದಾಳ್ದು ಸಹೃದಯಂ ವಾಲ್ಮೀಕಿ ತಾಂ
ನಡೆತಂದನಾತ್ಮಸುಖಿ, ಕೇಳ್, ತಮಸಾ ನದೀ ತಟಿಗೆ,
ತೇಜಸ್ವಿ, ತರುಣಂ ತಪೋವಲ್ಕಲ ವಸ್ತ್ರ ಶೋಭಿ.

ಅರ್ಥ: ಶ್ರೀರಾಮ ಕಥೆಯನ್ನು ಮಹರ್ಷಿ ನಾರದನ ವೀಣೆಯಿಂದ ಕೇಳಿ, ತಪಸ್ವಿಯೂ, ಸಹೃದಯನೂ, ತೇಜಸ್ವಿಯೂ ಆದ ತರುಣ ವಾಲ್ಮೀಕಿಯು ತನ್ನ ಕಮಲದಂತಹ ಕಣ್ಣುಗಳಲ್ಲಿ ಆನಂದಭಾಷ್ಪಗಳು ಉದುರುವಷ್ಟು ರೋಮಾಂಚನಗೊಂಡನು. ನಾರುಡೆಯನ್ನು ಧರಿಸಿದ್ದ ಅವನು ಆತ್ಮಾನಂದದಿಂದ ಸುಖಿಸುತ್ತಾ ತಮಸಾ ನದಿ ತೀರಕ್ಕೆ ನಡೆದು ಹೊರಟನು.

**qÁ.J£ï.ªÀÄºÉÃ±Àéj**
**¸ÀºÁAiÀÄPÀ ¥ÁæzsÁå¥ÀQ PÀ£ÀßqÀ «¨sÁUÀ**
**eÉJ¸ïJ¸ï PÀ¯Á,ªÁtÂdå ªÀÄvÀÄÛ «eÁÕ£À PÁ¯ÉÃdÄ, Hn**
**gÀ¸ÉÛ, ªÉÄÊ¸ÀÆgÀÄ**